All India Radio: Bangalore
National Bulletin In Kannada
16.02.2026 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><*><><><<>

ಮುಖ್ಯಾಂಶಗಳು

೧.ನವದೆಹಲಿಯಲ್ಲಿಂದು 'ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ' ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ

೨.ಕೃತಕ ಬುದ್ಧಿಮತ್ತೆ ಉತ್ತೇಜಿಸುವ ಡಿಜಿಟಲ್ ಅಭಿಯಾನಕ್ಕೆ ಇಂದು ಚಾಲನೆ

೩.ಭಾರತದಲ್ಲಿ ವಾಸಿಸುತ್ತಿರುವ ಶ್ರೀಲಂಕಾದ ತಮಿಳರಿಗೆ ಪೌರತ್ವ ನೀಡುವಂತೆ ಕೋರಿ ಪ್ರಧಾನಿ ಅವರಿಗೆ ತಮಿಳುನಾಡು ಮುಖ್ಯಮಂತ್ರಿ ಪತ್ರ

೪.ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಪಾಕಿಸ್ತಾನ ವಿರುದ್ಧ ಭಾರತಕ್ಕೆ ೬೧ ರನ್‌ಗಳ ಸ್ಫೋಟಕ ಜಯ

<><><><*><><><<>

ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ-೨೦೨೬ ಅನ್ನು ನವದೆಹಲಿಯಲ್ಲಿ ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಐದು ದಿನಗಳ ಈ ಶೃಂಗಸಭೆ, ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ರ ಜೊತೆಗೆ ನಡೆಯಲಿದ್ದು, ಕೃತಕ ಬುದ್ಧಿಮತ್ತೆಯ ರಾಷ್ಟ್ರೀಯ ಪ್ರದರ್ಶನವಾಗಿ ಇದು ಕಾರ್ಯನಿರ್ವಹಿಸಲಿದೆ. ಆಸ್ಟ್ರೇಲಿಯಾ, ಜಪಾನ್, ರಷ್ಯಾ, ಬ್ರಿಟನ್, ಫ್ರಾನ್ಸ್ ಸೇರಿದಂತೆ ೧೩ ದೇಶಗಳ ಮಂಟಪಗಳನ್ನು ಇದು ಒಳಗೊಂಡಿರಲಿದೆ. ೩೦೦ಕ್ಕೂ ಹೆಚ್ಚು ಪ್ರದರ್ಶನ ಮಂಟಪಗಳಲ್ಲಿ ನೇರ ಪ್ರದರ್ಶನಗಳನ್ನು ಆಯೋಜಿಸಲಾಗಿದೆ. ಇಂದಿನಿಂದ ಇದೇ ೨೦ರವರೆಗೆ ನಡೆಯಲಿರುವ ಈ ಶೃಂಗಸಭೆಯಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಮತ್ತು ಗ್ರೀಸ್ ಪ್ರಧಾನಿ ಕಿರಿಯಾಕೋಸ್ ಮಿಟ್ಸೋಟಾಕಿಸ್ ಭಾಗವಹಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಆಹ್ವಾನದ ಮೇರೆಗೆ, ಇತರ ಹಲವಾರು ನಾಯಕರು ಸಹ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದರಲ್ಲಿ ನೆದರ್ಲ್ಯಾಂಡ್ಸ್ ಪ್ರಧಾನಿ ಡಿಕ್ ಸ್ಕೂಫ್, ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸಾನಾಯಕ, ಭೂತಾನ್ ಪ್ರಧಾನಿ ತ್ಸೆರಿಂಗ್ ಟೋಬ್ಗೆ ಮತ್ತು ಮಾರಿಷಸ್ ಪ್ರಧಾನಿ ನವೀನ್ಚಂದ್ರ ರಾಮ್ಗೂಲಮ್ ಸೇರಿದ್ದಾರೆ. ಅಲ್ಲದೇ ಶೃಂಗಸಭೆಯಲ್ಲಿ ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಜ್ ಪೆರೆಜ್-ಕ್ಯಾಸ್ಟೆಜಾನ್, ಅಬುಧಾಬಿಯ ರಾಜಕುಮಾರ ಶೇಖ್ ಖಲೀದ್ ಬಿನ್ ಮೊಹಮ್ಮದ್ ಕ್ರೊಯೇಷಿಯಾ ಪ್ರಧಾನಿ ಆಂಡ್ರೆಜ್ ಪ್ಲೆಂಕೋವಿಕ್, ಎಸ್ಟೋನಿಯಾ ಅಧ್ಯಕ್ಷ ಅಲರ್ ಕರಿಸ್, ಫಿನ್‌ಲ್ಯಾಂಡ್ ಪ್ರಧಾನಿ ಪೆಟ್ಟೇರಿ ಓರ್ಪೋ, ಕಝಾಕಿಸ್ತಾನ್ ಪ್ರಧಾನಿ ಓಲ್ಜಾಸ್ ಬೆಕ್ಟೆನೋವ್, ಲಿಚ್ಟೆನ್‌ಸ್ಟೈನ್ ಆನುವಂಶಿಕ

ರಾಜಕುಮಾರ ಅಲೋಯಿಸ್, ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ, ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪಾರ್ಮೆಲಿನ್, ಬೊಲಿವಿಯಾ ಉಪಾಧ್ಯಕ್ಷ ಎಡ್ಮಂಡ್ ಲಾರಾ ಮೊಂಟಾನೊ, ಗಯಾನಾ ಉಪಾಧ್ಯಕ್ಷ ಭರತ್ ಜಗದಿಯೊ, ಸೆರ್ಬಿಯಾ ಉಪಾಧ್ಯಕ್ಷ ಅಲೆಕ್ಸಾಂಡರ್ ವುಸಿಕ್ ಮತ್ತು ಸೀಶೆಲ್ಸ್ ಉಪಾಧ್ಯಕ್ಷ ಸೆಬಾಸ್ಟಿಯನ್ ಪಿಳ್ಳೈ ಪಾಲ್ಗೊಳ್ಳಲಿದ್ದಾರೆ. ಇದೇ ವೇಳೆ ೪೫ ಕ್ಕೂ ಹೆಚ್ಚು ದೇಶಗಳ ನಿಯೋಗಗಳು ಶೃಂಗಸಭೆಯಲ್ಲಿ ಭಾಗವಹಿಸಲಿವೆ. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ಹಲವಾರು ಅಂತಾರಾಷ್ಟ್ರೀಯ ಸಂಸ್ಥೆಗಳ ಹಿರಿಯ ಅಧಿಕಾರಿಗಳು ಸಹ ಚರ್ಚೆಗಳಲ್ಲಿ ಭಾಗವಹಿಸಲಿದ್ದಾರೆ.

<>><><*><><<>

ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ, ಇಂಟೆಲ್ ಇಂಡಿಯಾ ಸಹಯೋಗದೊಂದಿಗೆ, ನೈತಿಕ, ಅಂತರ್ಗತ ಮತ್ತು ಜವಾಬ್ದಾರಿಯುತ ಕೃತಕಬುದ್ಧಿಮತ್ತೆ ಬಳಕೆಯನ್ನು ಉತ್ತೇಜಿಸುವ ಡಿಜಿಟಲ್ ಅಭಿಯಾನಕ್ಕೆ ದೇಶಾದ್ಯಂತದ ಇಂದು ಚಾಲನೆ ನೀಡಲಿದೆ. ಈ ಉಪಕ್ರಮದ ಮೂಲಕ, ೨೪ ಗಂಟೆಗಳಲ್ಲಿ 'ಕೃತಕ ಬುದ್ಧಿಮತ್ತೆಯ ಅಭಿಯಾನಕ್ಕಾಗಿ ಸ್ವೀಕರಿಸಲಾದ ಅತಿ ಹೆಚ್ಚು ಪ್ರತಿಜ್ಞೆಗಳು' ಎಂಬ ಅಧಿಕೃತ ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸಲು ಪ್ರಯತ್ನಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಇಂಡಿಯಾ ಎಐ ಮಿಷನ್ ಅಡಿಯಲ್ಲಿ ನಡೆಯುವ ಈ ಅಭಿಯಾನ, ವಿಶ್ವಾಸಾರ್ಹ ಮತ್ತು ಮಾನವ-ಕೇಂದ್ರಿತ ಕೃತಕ-ಬುದ್ಧಿಮತ್ತೆ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಭಾರತದ ಬದ್ಧತೆಯನ್ನು ಬಲಪಡಿಸುವ ಗುರಿ ಹೊಂದಿದೆ. ಈ ಉಪಕ್ರಮ, ಸನ್ನಿವೇಶ ಆಧಾರಿತ ಪ್ರಶ್ನೆಗಳನ್ನು ಒಳಗೊಂಡಿದ್ದು, ಭಾಗವಹಿಸುವವರು, ಔಪಚಾರಿಕ ಪ್ರತಿಜ್ಞೆ ಸ್ವೀಕರಿಸುವ ಮೊದಲು ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ ಅಭ್ಯಾಸಗಳ ಬಗ್ಗೆ ಚಿಂತಿಸಲು ಪ್ರೇರೇಪಿಸುತ್ತದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು, ಮುಂದಿನ ದಶಕದಲ್ಲಿ ದೇಶದ ಅಭಿವೃದ್ಧಿಗೆ ಮೂರು ಆದ್ಯತೆಗಳನ್ನು ಪಟ್ಟಿ ಮಾಡಿದ್ದಾರೆ. ಇದರಲ್ಲಿ ಹೆಚ್ಚಿನ ರಚನಾತ್ಮಕ ಸುಧಾರಣೆಗಳು, ನಾವೀನ್ಯತೆ ಮತ್ತು ಸರಳ ಆಡಳಿತ ಎಂಬ ಅಂಶಗಳು ಸೇರಿವೆ. ಸುದ್ದಿ ಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಪ್ರಧಾನಿ, ಕೇಂದ್ರ ಸರ್ಕಾರದ 'ಸುಧಾರಣಾ ಎಕ್ಸ್‌ಪ್ರೆಸ್' ಸಾಮಾನ್ಯ ನಾಗರಿಕರಿಗೆ ದೊಡ್ಡ ರೀತಿಯಲ್ಲಿ ಪ್ರಯೋಜನ ನೀಡುತ್ತಿದೆ. ಈ ವರ್ಷದ ಕೇಂದ್ರ ಬಜೆಟ್, ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಬೇಕೆಂಬ ಭಾರತದ ಹಂಬಲವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ.

<>><><*><><<>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ನಿನ್ನೆ ಜರ್ಮನಿಯಲ್ಲಿ ಮ್ಯೂನಿಕ್ ಭದ್ರತಾ ಸಮ್ಮೇಳನದ ಅಧ್ಯಕ್ಷ ವೋಲ್ಫ್‌ಗ್ಯಾಂಗ್ ಇಶಿಂಗರ್ ಅವರೊಂದಿಗೆ ಸಂವಾದ ನಡೆಸಿದರು. ಮ್ಯೂನಿಕ್ ಭದ್ರತಾ ಸಮ್ಮೇಳನ ೨೦೨೬ ಅಭಿಪ್ರಾಯಗಳನ್ನು ಪ್ರಸ್ತುತಪಡಿಸಲು ಮತ್ತು ದೃಷ್ಟಿಕೋನಗಳನ್ನು ವಿನಿಮಯ ಮಾಡಿಕೊಳ್ಳಲು ಉತ್ತಮ ಅವಕಾಶವನ್ನು ಒದಗಿಸಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ

ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ಸಮ್ಮೇಳನದ ಹೊರತಾಗಿ ಜೈಶಂಕರ್ ಅವರು ರೊಮೇನಿಯಾ ವಿದೇಶಾಂಗ ಸಚಿವ ಓನಾ-ಸಿಲ್ವಿಯಾ ಟೋಯಿಯು ಅವರನ್ನು ಭೇಟಿಯಾದರು. ಉಭಯ ಸಚಿವರು ಭಾರತ-ರೊಮೇನಿಯಾ ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಿದರು. ಬಳಿಕ ಸಚಿವರು, ಬುಂಡೆಸ್ಟ್ಯಾಗ್‌ನಲ್ಲಿ ಕ್ರಿಶ್ಚಿಯನ್ ಡೆಮಾಕ್ರಟಿಕ್ ಒಕ್ಕೂಟದ ನಾಯಕ ಜೆನ್ಸ್ ಸ್ಪಾನ್ ಮತ್ತು ಅವರ ತಂಡದೊಂದಿಗೆ ಸಭೆ ನಡೆಸಿದರು. ಅಲ್ಲದೆ, ಎಪಿಎಂ ಟರ್ಮಿನಲ್ಸ್‌ನ ಸಿಇಒ ಕೀತ್ ಸ್ವೆಂಡ್‌ಸೆನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

<>><><*><><<>

ಶ್ರೀಲಂಕಾದ ತಮಿಳರ ಪೌರತ್ವ ಅರ್ಜಿಗಳನ್ನು ಪರಿಗಣಿಸುವುದನ್ನು ನಿಷೇಧಿಸುವ ಹಿಂದಿನ ಆಡಳಿತಾತ್ಮಕ ಸೂಚನೆಗಳನ್ನು ರದ್ದುಗೊಳಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಮನವಿ ಮಾಡಿದ್ದಾರೆ. ಸುಮಾರು ೮೯ ಸಾವಿರ ಶ್ರೀಲಂಕಾ ತಮಿಳರು, ತಮಿಳುನಾಡಿನಲ್ಲಿ ವಾಸಿಸುತ್ತಿದ್ದಾರೆ. ಈ ಪೈಕಿ ಸಾಕಷ್ಟು ಪ್ರಮಾಣದ ಜನರು ೨೦ ಕ್ಕೂ ಹೆಚ್ಚು ವರ್ಷಗಳಿಂದ ಭಾರತದಲ್ಲಿ ವಾಸಿಸುತ್ತಿದ್ದಾರೆ. ಅಲ್ಲದೆ, ಶೇಕಡಾ ೪೦ ರಷ್ಟು ಜನರು ಭಾರತದ ನೆಲದಲ್ಲೇ ಜನಿಸಿದ್ದಾರೆ ಎಂದು ಸ್ಟಾಲಿನ್ ಹೇಳಿದ್ದಾರೆ. ಶ್ರೀಲಂಕಾದ ತಮಿಳರ ಸ್ಥಿತಿಯ ವಿವರವಾದ ಅಧ್ಯಯನವನ್ನು ಕೈಗೊಂಡ ಅನಿವಾಸಿ ತಮಿಳರ ಖಾತೆ ಸಚಿವ ನೇತೃತ್ವದಲ್ಲಿ ಸಲಹಾ ಸಮಿತಿಯ ಶಿಫಾರಸ್ಸಿನ ಆಧಾರದ ಮೇಲೆ ಪರಿಗಣಿಸಬೇಕಾದ ಕೆಲವು ಅಂಶಗಳನ್ನು ಈ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

<>><><*><><<>

ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ಇಂದಿನಿಂದ ಆಸ್ಟ್ರೇಲಿಯಾಕ್ಕೆ ನಾಲ್ಕು ದಿನಗಳ ಭೇಟಿಯನ್ನು ಕೈಗೊಳ್ಳಲಿದ್ದಾರೆ. ಈ ಭೇಟಿಯು, ಭಾರತ-ಆಸ್ಟ್ರೇಲಿಯಾ ರಕ್ಷಣಾ ಸಹಕಾರ ಮತ್ತಷ್ಟು ಬಲಪಡಿಸುವುದು ಹಾಗೂ ಉಭಯ ರಾಷ್ಟ್ರಗಳ ನಡುವಿನ ಸಂಬಂಧ ಬಲಪಡಿಸುವ ಗುರಿ ಹೊಂದಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಸೇನಾ ಮುಖ್ಯಸ್ಥರು ಆಸ್ಟ್ರೇಲಿಯಾದ ರಕ್ಷಣಾ ಪಡೆಯ ಹಿರಿಯ ನಾಯಕರೊಂದಿಗೆ ವ್ಯಾಪಕ ಸಂವಾದ ನಡೆಸಲಿದ್ದಾರೆ. ತರಬೇತಿ, ಜಂಟಿ ಸಮರಾಭ್ಯಾಸ, ವೃತ್ತಿಪರ ವಿನಿಮಯ ಮತ್ತು ಸಾಮರ್ಥ್ಯ ವೃದ್ಧಿ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿವೆ. ಜನರಲ್ ದ್ವಿವೇದಿ ಅವರು ಆಸ್ಟ್ರೇಲಿಯನ್ ರಕ್ಷಣಾ ಕಾಲೇಜಿನ ಕಮಾಂಡರ್ ಜೊತೆಯೂ ಸಂವಹನ ನಡೆಸಲಿದ್ದಾರೆ. ಅಲ್ಲದೆ, ಆಸ್ಟ್ರೇಲಿಯನ್ ಕಮಾಂಡ್ ಮತ್ತು ಸ್ಟಾಫ್ ಕಾಲೇಜಿನಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಭೇಟಿಯು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ರಕ್ಷಣಾ ಸಹಕಾರವನ್ನು ಮತ್ತಷ್ಟು ಹೆಚ್ಚಿಸಲು ಹಾಗೂ ಶಾಂತಿ, ಸ್ಥಿರತೆ ಮತ್ತು ಭದ್ರತೆಗೆ ಜಂಟಿಯಾಗಿ ಕೊಡುಗೆ ನೀಡಲು ಉಭಯ ರಾಷ್ಟ್ರಗಳ ಬದ್ಧತೆಯನ್ನು ಪುನರುಚ್ಚರಿಸುತ್ತದೆ.

<>><><*><><<>

ಢಾಕಾದಲ್ಲಿ ನಾಳೆ ನಡೆಯಲಿರುವ ಬಾಂಗ್ಲಾದೇಶ ರಾಷ್ಟ್ರೀಯತಾವಾದಿ ಪಕ್ಷದ ಅಧ್ಯಕ್ಷ ತಾರಿಕ್ ರೆಹಮಾನ್ ನೇತೃತ್ವದ ಬಾಂಗ್ಲಾದೇಶದ ನೂತನ ಸರ್ಕಾರದ ಪ್ರಮಾಣವಚನ ಸಮಾರಂಭದಲ್ಲಿ

ಲೋಕಸಭಾಧ್ಯಕ್ಷ ಓಂ ಬಿರ್ಲಾ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಈ ಸಮಾರಂಭದಲ್ಲಿ ಲೋಕಸಭಾಧ್ಯಕ್ಷರು ಭಾಗವಹಿಸುವುದು ಭಾರತ ಮತ್ತು ಬಾಂಗ್ಲಾದೇಶದ ಜನರ ನಡುವಿನ ಆಳವಾದ ಸ್ನೇಹವನ್ನು ಪ್ರತಿಬಿಂಬಿಸುತ್ತದೆ. ಇದು ಉಭಯ ರಾಷ್ಟ್ರಗಳನ್ನು ಒಗ್ಗೂಡಿಸುವ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಭಾರತದ ದೃಢವಾದ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

<>><><*><><<>

ಕೊಲೊಂಬೋದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎ ಗುಂಪಿನ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ಭಾರತ, ೬೧ ರನ್‌ಗಳಿಂದ ಸ್ಫೋಟಕ ಜಯ ಸಾಧಿಸಿದೆ. ಸತತ ಮೂರು ಪಂದ್ಯಗಳ ಗೆಲುವಿನ ಮೂಲಕ ಸೂಪರ್ ೮ ಹಂತಕ್ಕೆ ಭಾರತ ಲಗ್ಗೆ ಇಟ್ಟಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೭೫ ರನ್ ಗಳಿಸಿತು. ಇಶಾನ್ ಕಿಶನ್ ೪೦ ಎಸೆತಗಳಲ್ಲಿ ೭೭ ರನ್ ಸಿಡಿಸಿ, ತಂಡದ ಬೃಹತ್ ಮೊತ್ತಕ್ಕೆ ನೆರವಾದರು. ೧೭೬ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಪಾಕಿಸ್ತಾನ, ಭಾರತೀಯ ಬೌಲರ್‌ಗಳ ಸಂಘಟಿತ ದಾಳಿಯಿಂದಾಗಿ ೧೮ ಓವರ್‌ಗಳಲ್ಲಿ ೧೧೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ಇಶಾನ್ ಕಿಶನ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಡಿ ಗುಂಪಿನ ಪಂದ್ಯದಲ್ಲಿ ಅಫ್ಘಾನಿಸ್ತಾನ ಮತ್ತು ಅಮೆರಿಕ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಬೆಳಗ್ಗೆ ೧೧ ಗಂಟೆಗೆ ಆರಂಭವಾಗಲಿದೆ. ಕೊಲ್ಕತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿರುವ ಸಿ ಗುಂಪಿನ ಪಂದ್ಯದಲ್ಲಿ ಇಟಲಿ ತಂಡ, ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಶ್ರೀಲಂಕಾದ ಪಲ್ಲಿಕ್ಕಿಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಬಿ ಗುಂಪಿನ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಆಸ್ಟ್ರೇಲಿಯಾ ಸೆಣಸಾಟ ನಡೆಸಲಿದೆ. ಪಂದ್ಯ ರಾತ್ರಿ ೭ ಗಂಟೆಗೆ ಪ್ರಾರಂಭವಾಗಲಿದೆ.

<>><><*><><<>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಫ್ರಾನ್ಸ್ ರಕ್ಷಣಾ ಸಚಿವ ಕ್ಯಾಥರಿನ್ ವೌಟ್ರಿನ್ ಅವರೊಂದಿಗೆ ಬೆಂಗಳೂರಿನಲ್ಲಿ ನಾಳೆ ನಡೆಯಲಿರುವ ೬ನೇ ಭಾರತ-ಫ್ರಾನ್ಸ್ ವಾರ್ಷಿಕ ರಕ್ಷಣಾ ಸಂವಾದದ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>